ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 31-03-2017

# ಪತ್ರಿಕಾ ಆಮಂತ್ರಣ

1. ರವೀಂದ್ರ ಕಲಾಕ್ಷೇತ್ರ – 50 ಸುವರ್ಣ ಸಂಭ್ರಮ – ನೆನಪಿನೋಕುಳಿ ಉತ್ಸವ: "ಸಂಗೀತ ಹಬ್ಬ"

   ಪತ್ರಿಕಾಗೋಷ್ಠಿ ನಡೆಸಿಕೊಡುವವರು:

   ಕೆ.ಎ. ದಯಾನಂದ, ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

   ಶ್ರೀನಿವಾಸ ಜಿ ಕಪ್ಪಣ್ಣ, ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷರು,

   ದಿನಾಂಕ: 01-04-2017, ಶನಿವಾರ, ಬೆಳಿಗ್ಗೆ 11-00 ಗಂಟೆಗೆ.

   ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

2. ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ

   ಆದ್ಯ ವಚನಾರ ನೇಕಾರ ಸಂತ ಶ್ರೀ ದೇವರ ದಾಸಿಮಯ್ಯ ಜಯಂತಿ

   ಉದ್ಘಾಟನೆ:

   ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವೆ.

   ಮುಖ್ಯ ಅತಿಥಿಗಳು:

   ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.

   ಕೆ.ಜೆ. ಜಾರ್ಜ್, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.

   ಎಚ್. ಆಂಜನೇಯ, ಸಮಾಜ ಕಲ್ಯಾಣ ಸಚಿವರು.

   ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೆಂಗಳೂರು ಮಹಾನಗರ ಪಾಲಿಕೆ

ಶ್ರೀಮತಿ ಶಕುಂತಲಾ ಟಿ. ಶೆಟ್ಟಿ, ಶಾಸಕರು, ಪುತ್ತೂರು ವಿಧಾನಸಭಾ ಕ್ಷೇತ್ರ ಹಾಗೂ ಸಂಸದೀಯ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.

**ಅಧ್ಯಕ್ಷತೆ:**

**ಆರ್. ವಿ. ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆರ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.**

**ದಿನಾಂಕ: 01–04–2017, ಶನಿವಾರ, ಸಂಜೆ 6–00 ಗಂಟೆಗೆ.**

**ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.**

3. ಬೆಳ್ಳಿ ಸಿನಿಮಾ –ಬೆಳ್ಳಿ ಮಾತು

## ಪದ್ಮಾ ಕುಮಟಾ ಸ್ಮರಣೆ: "ಚೋಮನ ದುಡಿ" ಚಿತ್ರ ಪ್ರದರ್ಶನ

**ದಿನಾಂಕ: 01–04–2017, ಶನಿವಾರ, ಸಂಜೆ 4–00 ಗಂಟೆಗೆ.**

ಸ್ಥಳ: ಚಾಮುಂಡೇಶ್ವರಿ ಸ್ಟುಡಿಯೋ, ಬೆಂಗಳೂರು.

ಕಾರ್ಯಕ್ರಮ ಅಧ್ಯಕ್ಷತೆ:

ಎಸ್.ವಿ.ರಾಜೇಂದ್ರ ಸಿಂಗ್ ಬಾಬು

ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರು.

## ಪತ್ರಿಕಾ ಪ್ರಕಟಣೆ

# ಬೆಂಗಳೂರು ಡಾ. ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕಾನಾಮಿಕ್ಸ್ ಶಂಕುಸ್ಥಾಪನೆಗೆ ರಾಷ್ಟ್ರಪತಿ

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

**ಡಾ.ಬಿ. ಆರ್. ಅಂಬೇಡ್ಕರ್ ಅವರ 125 ನೇ ಜನ್ಮ ದಿನಾಚರಣೆ ಅಂಗವಾಗಿ ರಾಜ್ಯ ಸರ್ಕಾರ ಪ್ರಾರಂಭಿಸುತ್ತಿರುವ ಬೆಂಗಳೂರು ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕಾನಾಮಿಕ್ಸ್ ಸಂಸ್ಥೆಯ ಶಿಲಾನ್ಯಾಸವನ್ನು ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಅವರು**

ಅಂಬೇಡ್ಕರರವರ ಜನ್ಮ ದಿನವಾದ ಏಪ್ರಿಲ್ 14 ರಂದು ನೆರವೇರಿಸಲಿದ್ದಾರೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಅವರು ತಿಳಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಾ ಕರ್ನಾಟಕವು ದೇಶದಲ್ಲಿ ಜ್ಞಾನಕೇಂದ್ರವಾಗಿ ಗುರುತಿಸಿಕೊಂಡಿದೆ. ರಾಜ್ಯ ಸರ್ಕಾರ ಪ್ರಾರಂಭಿಸುತ್ತಿರುವ ಬೆಂಗಳೂರು ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕಾನಾಮಿಕ್ಸ್ ಸಂಸ್ಥೆಯನ್ನು ಅಂತರರಾಷ್ಟ್ರೀಯ ಗುಣಮಟ್ಟದಲ್ಲಿ ಸ್ಥಾಪಿಸಲಾಗುವುದು ಎಂದು ತಿಳಿಸಿದರು.

ಈಗಾಗಲೇ ಕಟ್ಟಡದ ವಿನ್ಯಾಸ, ಟೆಂಡರ್ ಪ್ರಕ್ರಿಯೆ ಮುಗಿದಿದ್ದು ಸಂಸ್ಥೆಯು 2017-18 ನೇ ಶೈಕ್ಷಣಿಕ ವರ್ಷದಲ್ಲಿ ಕಾರ್ಯಾರಂಭ ಮಾಡಲಿದೆ. ರಾಷ್ಟ್ರಪತಿಗಳು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಈ ಸಂಸ್ಥೆಯ ಶಿಲಾನ್ಯಾಸ ನೆರವೇರಿಸುವರು. ಇದೊಂದು ಸ್ವಾಯತ್ತ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದೆ ಎಂದು ಹೇಳಿದರು.

ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಆವರಣದಲ್ಲಿ ಸಕಲ ಸವಲತ್ತುಗಳು ಇರುವ ಕಾರಣಕ್ಕೆ ಅಲ್ಲಿಯೇ ಈ ಎಕಾನಾಮಿಕ್ಸ್ ಶಾಲೆಯನ್ನು ಆರಂಭಿಸಲು ಸರ್ಕಾರ ನಿರ್ಧರಿಸಿದೆ. ಒಂದು ವರ್ಷದೊಳಗೆ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು. ಈಗಾಗಲೇ ಲಂಡನ್ ಸ್ಕೂಲ್ ಆಫ್ ಎಕಾನಾಮಿಕ್ಸ್ ಶಿಕ್ಷಕರನ್ನು ಬಳಸಿಕೊಳ್ಳಲು ಸಂಪರ್ಕಿಸಲಾಗಿದ್ದು ಮಾತುಕತೆ ನಡೆಯುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಜಾವೇದ್ ಅಖ್ತರ್, ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕಾನಾಮಿಕ್ಸ್‌ನ ನಿರ್ದೇಶಕ ಅನೂಪ್ ಕೆ ಪೂಜಾರಿ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

## ನೆನಪಿನೋಕುಳಿ ಉತ್ಸವ – 9 ಸಂಗೀತ ಹಬ್ಬ

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವೀಂದ್ರ ಕಲಾಕ್ಷೇತ್ರ – 50 ಸಾಂಸ್ಕೃತಿಕ ಸಮಿತಿ ಏಪ್ರಿಲ್ 5 ರಿಂದ 9 ರವರೆಗೆ "ನೆನಪಿನೋಕುಳಿ ಉತ್ಸವ – 9 ಸಂಗೀತ ಹಬ್ಬ ಅಂಗವಾಗಿ ಯುವ ಕಲಾವಿದರನ್ನು ಗುರುತಿಸುವ ಮತ್ತು ಅವರ ಪ್ರತಿಭೆಯನ್ನು ಪ್ರೋತ್ಸಾಹಿಸುವ ದೃಷ್ಠಿಯಿಂದ ಕನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ ಮತ್ತು ಸಮಕಾಲೀನ ಸಂಗೀತ ಪ್ರಕಾರಗಳಲ್ಲಿ ಮೂರು ದಿನಗಳ ಸಂಗೀತ ಸ್ಪರ್ಧೆಯನ್ನು ಹಮ್ಮಿಕೊಂಡಿದೆ.

ರಾಷ್ಟ್ರದಲ್ಲೇ ಅತ್ಯಂತ ಪ್ರಮುಖ ರಂಗಮಂದಿರಗಳಲ್ಲಿ ಒಂದಾದ ರವೀಂದ್ರ ಕಲಾಕ್ಷೇತ್ರಕ್ಕೆ 50 ವರ್ಷಗಳು ತುಂಬಿದ ಹಿನ್ನೆಲೆಯಲ್ಲಿ ಸಾಂಸ್ಕೃತಿಕ ಉತ್ಸವವನ್ನು ಏರ್ಪಡಿಸಲು ಕರ್ನಾಟಕ ಸರ್ಕಾರ ' ರವೀಂದ್ರ ಕಲಾಕ್ಷೇತ್ರ –50' ಉತ್ಸವ ಸಮಿತಿ ರಚಿಸಿದೆ.

ಏಪ್ರಿಲ್ 5 ರಿಂದ 9 ರವರೆಗೆ ಸಂಗೀತದ ವಿವಿಧ ಪ್ರಕಾರಗಳ ಉತ್ಸವ 'ಸಂಗೀತ ಹಬ್ಬ' ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ನಾಡಿನ ಹೆಸರಾಂತ ಗಾಯಕ/ಗಾಯಕಿಯರು ಪಾಲ್ಗೊಳ್ಳಲಿದ್ದಾರೆ. ಅಂತರರಾಷ್ಟ್ರೀಯ ಖ್ಯಾತಿಯ ಡಾ. ಸುಮಾ ಸುಧೀಂದ್ರ (9845044446) ಹಿಂದೂಸ್ಥಾನಿ ಗಾಯಕರಾದ ಪಂಡಿತ್ ಪರಮೇಶ್ವರ ಹೆಗಡೆ ( 9036001986) ಮತ್ತು ಪ್ರತಿಷ್ಠಿತ ಶಿಶುನಾಳ ಶರೀಫ ಪ್ರಶಸ್ತಿ ಪುರಸ್ಕೃತರಾದ ವೈ.ಕೆ. ಮುದ್ದುಕೃಷ್ಣ ಇವರುಗಳು ಈ ಉತ್ಸವದ ಸಂಚಾಲಕರಾಗಿರುತ್ತಾರೆ.

ಸ್ಪರ್ಧಾ ನಿಯಮ ಮತ್ತು ವಿವರಗಳು:

* ಪ್ರತಿ ಗುಂಪಿನಲ್ಲಿ ಕನಿಷ್ಠ 5 ಹಾಗೂ ಗರಿಷ್ಠ 10 ಜನ ಸ್ಪರ್ಧಿಗಳು ಭಾಗವಹಿಸಬಹುದು.

* ಅವಧಿ 10 ರಿಂದ 15 ನಿಮಿಷಗಳು.

* ಪ್ರದರ್ಶನಕ್ಕೆ ವ್ಯವಸ್ಥೆ ಮಾಡಿಕೊಳ್ಳಲು 10 ನಿಮಿಷ ಅವಕಾಶ.

* ಸಂಗೀತ ಶಾಲೆಗಳು, ಶಾಲಾ ಕಾಲೇಜುಗಳ ಅಧಿಕೃತ ವಿದ್ಯಾರ್ಥಿಗಳು ಮಾತ್ರ ಭಾಗವಹಿಸಬಹುದು.

* ಪ್ರಯಾಣ ಮತ್ತು ಊಟದ ವ್ಯವಸ್ಥೆಯನ್ನು ಭಾಗವಹಿಸುವ ತಂಡಗಳೇ ಮಾಡಿಕೊಳ್ಳಬೇಕು.

* ತಮ್ಮ ಕಾರ್ಯಕ್ರಮದ ಬಗ್ಗೆ ಯಾವುದೇ ಸಿಡಿ ಅಥವಾ ಲಿಂಕ್ ಇದ್ದರೆ ನಮ್ಮೊಂದಿಗೆ ಹಂಚಿಕೊಳ್ಳಬಹುದು.

* ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ಶಾಲಾ–ಕಾಲೇಜು ಅಥವಾ ಸಂಗೀತ ಶಾಲೆಗಳ ಅಧಿಕೃತ ಪ್ರತಿನಿಧಿಗಳಾಗಿರಬೇಕು.

* ಸ್ಪರ್ಧೆಗೆ ವಾದ್ಯ ಸಹಕಾರವನ್ನು ನೀಡಲಾಗುವುದು.

* ಪ್ರತಿ ವಿಭಾಗದಲ್ಲಿ ಗೆದ್ದವರಿಗೆ ದಿನಾಂಕ: 09–04–2017 ರಂದು ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿ ಪ್ರದರ್ಶನ ನೀಡಲು ಅವಕಾಶವಿರುತ್ತದೆ. ಜೊತೆಗೆ ಕನ್ನಡ ಮತ್ತು ಸಂಸ್ಕೃತಿ

ಇಲಾಖೆವತಿಯಿಂದ ವರ್ಷಾವಧಿ ನಡೆಯುವ ವಿವಿಧ ಕಲಾ ಉತ್ಸವಗಳಲ್ಲಿ ಪಾಲ್ಗೊಳ್ಳಲು ಅವಕಾಶವಿರುತ್ತದೆ. ಕೆಲವು ಟಿ.ವಿ. ಮಾಧ್ಯಮಗಳಲ್ಲೂ ಅವಕಾಶ ದೊರಕಿಸಲು ಪ್ರಯತ್ನಿಸಲಾಗುವುದು.

*ಸ್ಪರ್ಧೆಯ ಬಗ್ಗೆ ಸಮಿತಿಯ ತೀರ್ಮಾನ ಅಂತಿಮ.

* ಹೆಚ್ಚಿನ ಮಾಹಿತಿಗೆ ಡಾ. ಸುಮಾ ಸುಧೀಂದ್ರ (98450444446), ಉತ್ಸವದ ಸಂಚಾಲಕಿ, ಇವರನ್ನು ಸಂಪರ್ಕಿಸಬಹುದು.

* ಅರ್ಜಿಯನ್ನು ಸಂಸ್ಥೆಯ ಅಧಿಕೃತ ಲೆಟರ್‌ಹೆಡ್‌ನಲ್ಲಿ ಕೆಳಕಂಡ ಮಾಹಿತಿಯೊಂದಿಗೆ ಸಲ್ಲಿಸಬೇಕು.

1. ಸಂಸ್ಥೆಯ ಹೆಸರು, ವಿಳಾಸ 2) ಭಾಗವಹಿಸುವ ವಿದ್ಯಾರ್ಥಿಯ ಹೆಸರು, ವಿಳಾಸ ಹಾಗೂ ದೂರವಾಣಿ ಸಂಖ್ಯೆ 3) ಭಾಗವಹಿಸುವ ಕಾರ್ಯಕ್ರಮಗಳ ವಿವರ 4) ಪತ್ರದಲ್ಲಿ ಸಂಸ್ಥೆಯ ಮುಖ್ಯಸ್ಥರ ಸಹಿ ಇರಬೇಕು ಮತ್ತು ಸಂಸ್ಥೆಯ ಮೊಹರು ನೋಂದಾಯಿಸಿರಬೇಕು.

ಅರ್ಜಿ ಸಲ್ಲಿಸಲು ಏಪ್ರಿಲ್ 1 ಕೊನೆಯ ದಿನವಾಗಿರುತ್ತದೆ.

ಅರ್ಜಿಯನ್ನು ರವೀಂದ್ರ ಕಲಾಕ್ಷೇತ್ರ – 50 ಸಾಂಸ್ಕೃತಿಕ ಸಮಿತಿ ಕಚೇರಿ, ರವೀಂದ್ರ ಕಲಾಕ್ಷೇತ್ರ ಆವರಣ, (ಮಹಿಳಾ ವಿಶ್ರಾಂತಿ ಕೊಠಡಿ) ಜೆ.ಸಿ. ರಸ್ತೆ, ಬೆಂಗಳೂರು – 560 001, ದೂರವಾಣಿ ಸಂಖ್ಯೆ 080 – 22243317.

ಅರ್ಜಿಯನ್ನು ನೇರವಾಗಿ ಡಾ. ಸುಮಾ ಸುಧೀಂದ್ರ ಅವರಿಗೆ **taranginiarts@gmail.com** ಗೆ ಮೇಲ್ ಮಾಡಬಹುದಾಗಿದೆ ಎಂದು ರವೀಂದ್ರ ಕಲಾಕ್ಷೇತ್ರ – 50 ಸಾಂಸ್ಕೃತಿಕ ಸಮಿತಿ ಅಧ್ಯಕ್ಷರು ತಿಳಿಸಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

# ವಿಶ್ವ ಆಟಿಸಂ ಅರಿವು ದಿನಾಚರಣೆ – 2017

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 2 ರ ಭಾನುವಾರದಂದು

ಬೆಳಿಗ್ಗೆ 10.00 ಗಂಟೆಗೆ ಕಬ್ಬನ್ ಉದ್ಯಾನವನದ ಜವಾಹರ ಬಾಲಭವನದಲ್ಲಿ "ವಿಶ್ವ ಆಟಿಸಂ ಅರಿವು ದಿನಾಚರಣೆ – 2017" ಅನ್ನು ಹಮ್ಮಿಕೊಂಡಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ಸಮಾರಂಭದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ.

ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಬೆಂಗಳೂರು ಕೇಂದ್ರ ಲೋಕಸಭಾ ಸದಸ್ಯ ಪಿ.ಸಿ. ಮೋಹನ್, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹಾಗೂ ಶಾಂತಿನಗರ ವಿಧಾನಸಭಾ ಕ್ಷೇತ್ರದ ಶಾಸಕ ಎನ್. ಎ. ಹ್ಯಾರೀಸ್, ಶ್ರೀಮತಿ ಶಕುಂತಲಾ ಟಿ. ಶೆಟ್ಟಿ, ಶಾಸಕರು, ಪುತ್ತೂರು ವಿಧಾನಸಭಾ ಕ್ಷೇತ್ರ ಹಾಗೂ ಸಂಸದೀಯ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ರಾಜ್ಯ ಬಾಲಭವನ ಸೊಸೈಟಿ ಅಧ್ಯಕ್ಷರಾದ ಡಾ. ಅಂಜಲಿ ನಿಂಬಾಳ್ಕರ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

## ಬೆಳ್ಳಿ ಸಿನಿಮಾ –ಬೆಳ್ಳಿ ಮಾತು

## ಪದ್ಮಾ ಕುಮಟಾ ಸ್ಮರಣೆ: "ಚೋಮನ ದುಡಿ" ಚಿತ್ರ ಪ್ರದರ್ಶನ

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿ ಪ್ರತಿ ಶನಿವಾರ ಹಮ್ಮಿಕೊಳ್ಳುವ ಬೆಳ್ಳಿ ಸಿನಿಮಾ – ಬೆಳ್ಳಿ ಮಾತು ಕಾರ್ಯಕ್ರಮದಲ್ಲಿ ಇತ್ತೀಚೆಗೆ ನಿಧನರಾದ ಖ್ಯಾತ ಕಲಾವಿದರಾದ ಶ್ರೀಮತಿ ಪದ್ಮಾ ಕುಮಟಾ ಅವರ ನೆನಪಿನಲ್ಲಿ ಏಪ್ರಿಲ್ 1, 2017 ರಂದು ಸಂಜೆ 4.00 ಗಂಟೆಗೆ ನಗರದ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಪದ್ಮಾ ಕುಮಟಾ ಸ್ಮರಣೆ ಹಾಗೂ **ಚೋಮನ ದುಡಿ** ಚಿತ್ರ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರಾದ ಎನ್.ಆರ್.ವಿಶುಕುಮಾರ್, ಹಿರಿಯ ಚಲನಚಿತ್ರ ಕಲಾವಿದ ಎಂ.ಕೆ.ಸುಂದರ್ ರಾಜ್, ಮಾಧ್ಯಮ ತಜ್ಞ ಜಿ.ಎನ್.ಮೋಹನ್, ಹಿರಿಯ ಚಲನಚಿತ್ರ ಕಲಾವಿದೆ ಶ್ರೀಮತಿ ಗಾಯತ್ರಿ ಪ್ರಭಾಕರ್, ಚಲನಚಿತ್ರ ಕಲಾವಿದ ಅರುಣ್ ಸಾಗರ್, ಭಾಗವಹಿಸಲಿದ್ದಾರೆ. ಕಾರ್ಯಕ್ರಮದ

ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾದ ಎಸ್.ವಿ.ರಾಜೇಂದ್ರ ಸಿಂಗ್ ಬಾಬು ವಹಿಸಲಿದ್ದಾರೆ.

## ರಾಜ್ಯದ ಮಹಿಳಾ ಆರ್ಥಿಕ ಅಭಿವೃದ್ಧಿ ಕಾರ್ಯಕ್ಕೆ ಅಂತಾರಾಷ್ಟ್ರೀಯ ಪ್ರಶಸ್ತಿ

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರ ಕೈಗೊಂಡ ಮಹಿಳಾ ಆರ್ಥಿಕ ಅಭಿವೃದ್ಧಿ ಕಾರ್ಯವನ್ನು ಗುರುತಿಸಿ ಅಮೇರಿಕಾದ ವಿ ಕನೆಕ್ಟ್ ಇಂಟರ್‌ನ್ಯಾಷನಲ್ ಸಂಸ್ಥೆಯು **"Most Supportive State Government Award 2017"** ನ್ನು ಕರ್ನಾಟಕ ಸರ್ಕಾರಕ್ಕೆ ಇಂದು ಪ್ರದಾನ ಮಾಡಲಾಯಿತು.

ಕರ್ನಾಟಕ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಕೆ. ರತ್ನ ಪ್ರಭ ಅವರು ಈ ಪ್ರಶಸ್ತಿಯನ್ನು ಇಂದು ವಾಷಿಂಗ್‌ಟನ್ ಡಿಸಿಯಲ್ಲಿ ಸ್ವೀಕರಿಸಿದರು.

ವಿ ಕನೆಕ್ಟ್ ಇಂಟರ್‌ನ್ಯಾಷನಲ್ ಸಂಸ್ಥೆಯು ಸಂಯುಕ್ತ ಸಂಸ್ಥಾನದ ಹೊರಗಿರುವ ಮಹಿಳಾ ವಾಣಿಜ್ಯ ಉದ್ಯಮಿಗಳ ಸಂಸ್ಥೆಗಳನ್ನು ಗುರುತಿಸಿ ಶಿಕ್ಷಣ ಮತ್ತು ನೋಂದಣಿಯೊಂದಿಗೆ ಬಹುರಾಷ್ಟ್ರೀಯ ವಾಣಿಜ್ಯ ಕಾರ್ಪೋರೇಟ್ ಖರೀದಿದಾರರನ್ನು ಸಂಪರ್ಕಿಸುವ ಕಾರ್ಯ ಮಾಡುತ್ತಿರುವ ವಿಶ್ವದ ಅತಿ ದೊಡ್ಡ ಸಂಸ್ಥೆಯಾಗಿದೆ.

ಕರ್ನಾಟಕ ಸರ್ಕಾರವು ಮಹಿಳೆಯರ ಉದ್ಯಮಗಳು ಇತರೆ ಉದ್ಯಮಗಳೊಂದಿಗೆ ಸಮನಾಗಿ ಅಭಿವೃದ್ಧಿ ಹೊಂದಲು ಹೆಚ್ಚಿನ ಮಹತ್ವವನ್ನು ನೀಡಿರುವ ಬಗ್ಗೆ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಯವರ ಪಾತ್ರ ಅತಿ ಪ್ರಾಮುಖ್ಯವಾಗಿದೆಯೆಂದು ವಿ ಕನೆಕ್ಟ್ ಇಂಟರ್‌ನ್ಯಾಷನಲ್ ಸಂಸ್ಥೆಯು ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಸಹ ಸಂಸ್ಥಾಪಕರಾದ ಮಿಸಸ್. ಎಲಿಜಬೆತ್ ಎ. ವಾಜ್‌ಕ್ವಿಸ್ ತಿಳಿಸಿದ್ದಾರೆ.

ಅಂತಾರಾಷ್ಟೀಯ ಸಮುದಾಯವು ಮಹಿಳಾ ಆರ್ಥಿಕ ಸಬಲೀಕರಣಕ್ಕಾಗಿ ಹಲವಾರು ಪ್ರಮುಖ ಅಧ್ಯಯನಗಳನ್ನು ಕೈಗೊಂಡಿದ್ದು ಈ ಕಾರ್ಯವು ಅವಿಚ್ಛಿನ್ನವಾಗಿ ನಡೆಯುತ್ತದೆ. ಕರ್ನಾಟಕ ಸರ್ಕಾರವು ಕಳೆದ ಹಲವಾರು ವರ್ಷಗಳಿಮದ ಮಹಿಳಾ ಅಭಿವೃದ್ಧಿಗಾಗಿ ಪೂರಕವಾದ ಕೆಲಸವನ್ನು ತಾವು ಮತ್ತು ತಮ್ಮ ತಂಡವು ಅದ್ಭುತವಾಗಿ ನಿರ್ವಹಿಸಿರುವುದನ್ನು ವಿ ಕನೆಕ್ಟ್ ಇಂಟರ್‌ನ್ಯಾಷನಲ್ ಸಂಸ್ಥೆಯು ಗುರುತಿಸಿದೆ.

ಈ ಪ್ರಶಸ್ತಿಯು ವಿಶ್ವದಲ್ಲಿಯೇ ಮೊದಲ ಬಾರಿಗೆ ಒಂದು ಸರ್ಕಾರಕ್ಕೆ ನೀಡಲಾಗುತ್ತಿದೆ. ಈ ಪ್ರಶಸ್ತಿಯು ಅನನ್ಯ ಮತ್ತು ವಿಶೇಷವಾಗಿದ್ದು ಅಂತರಾಷ್ಟ್ರೀಯ ಮಟ್ಟದಲ್ಲಿ ಸರ್ಕಾರಕ್ಕೆ ಮಾನ್ಯತೆ ತಂದಿದೆ.

. ಈ ಪ್ರಶಸ್ತಿ ಮಹಿಳಾ ಆರ್ಥಿಕ ಸಬಲೀಕರಣ ಮತ್ತು ಮಹಿಳಾ ಉದ್ಯಮ ಕ್ಷೇತ್ರವನ್ನು ಬಲಿಷ್ಠಗೊಳಿಸಲು ಸರ್ಕಾರಕ್ಕೆ ಸಹಕಾರಿಯಾಗುತ್ತದೆ. ಕರ್ನಾಟಕ ರಾಜ್ಯವು ಹೂಡಿಕೆದಾರರಿಗೆ ಭಾರತದಲ್ಲಿಯೇ ಮೊದಲನೇ ಸ್ಥಾನದಲ್ಲಿದ್ದು, ವಾಣಿಜ್ಯ ಅವಕಾಶಗಳನ್ನು ನೀಡುವಲ್ಲಿ ಉದ್ಯಮಾವಕಾಶಗಳನ್ನು ನೀಡುವಲ್ಲಿ ಇತರೆ ರಾಜ್ಯಗಳಿಗಿಂತ ಮುಂಚೂಣಿಯಲ್ಲಿರಲು ಕರ್ನಾಟಕ ರಾಜ್ಯವು ಮೊದಲನೇ ಸ್ಥಾನದಲ್ಲಿ ನಿಲ್ಲಲು ಈ ಪ್ರಶಸ್ತಿಯು ಸಹಕಾರಿಯಾಗುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಎಂಎಸ್/ಕೆಎಂ

## ಏಪ್ರಿಲ್ 2 ಹಾಗೂ 30 ರಂದು ಎರಡು ಹಂತದ ಪಲ್ಸ್ ಪೋಲಿಯೋ

**– ಡಾ: ಶಾಲಿನಿ ರಜನೀಶ್**

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿನ ಐದು ವರ್ಷ ಒಳಗಿನ 74.90 ಲಕ್ಷ ಮಕ್ಕಳಿಗೆ ಎರಡು ಹಂತದ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮವನ್ನು ಏಪ್ರಿಲ್ 2 ಹಾಗೂ 30 ರಂದು ಆಯೋಜಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ಅವರು ಇಂದು ತಿಳಿಸಿದರು.

ವಿಕಾಸಸೌಧದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳನ್ನುದ್ದೇಶಿಸಿ ಮಾತನಾಡಿದ ಅವರು 2014 ರಲ್ಲೇ ಭಾರತ ಪೋಲೀಯೋ ಮುಕ್ತ ರಾಷ್ಟ್ರ ಎಂದು ವಿಶ್ವಸಂಸ್ಥೆ ಘೋಷಿಸಿದೆ. 2016 ರಲ್ಲಿ ಮೂರು ರಾಷ್ಟ್ರಗಳಲ್ಲಿ 37 ಪೋಲೀಯೋ ಪ್ರಕರಣಗಳು ವರದಿಯಾಗಿರುವ ಹಿನ್ನೆಲೆಯಲ್ಲಿ ಏಪ್ರಿಲ್ 2 ರಂದು ರಾಜ್ಯಾದ್ಯಂತ ಐದು ವರ್ಷದ ಒಳಗಿನ ಮಕ್ಕಳಿಗೆ ಉಚಿತವಾಗಿ ಲಸಿಕೆ ಹಾಕಲಾಗುತ್ತದೆ ಎಂದು ಹೇಳಿದರು.

ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಅವರು ಚಾಲನೆ ನೀಡಲಿದ್ದಾರೆ ರಾಜ್ಯಾದ್ಯಂತ ಹಳ್ಳಿ, ನಗರ, ಪಟ್ಟಣಗಳು ಸೇರಿದಂತೆ, ಬಸ್‌ನಿಲ್ದಾಣ, ವಿಮಾನ ನಿಲ್ದಾಣ, ರೈಲು ನಿಲ್ದಾಣಗಳಲ್ಲಿಲಯೂ ಪಲ್ಸ್ ಪೋಲೀಯೋ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದ ಡಾ: ಶಾಲಿನಿ ರಜನೀಶ್

ಅವರು ರಾಜ್ಯಾದ್ಯಂತ 32,617 ಲಸಿಕಾ ಬೂತುಗಳನ್ನು ಸ್ಥಾಪಿಸಲಾಗುವುದು ಹಾಗೂ 51,732 ತಂಡಗಳನ್ನು ರಚಿಸಲಾಗಿದೆ. 1,03,464 ಲಸಿಕಾ ಕಾರ್ಯಕರ್ತರು ಮನೆ ಮನೆಗೆ ತೆರಳಿ ಲಸಿಕೆ ಹಾಕಲಿದ್ದಾರೆ. ಪೋಲಿಯೋ ಹನಿ ಹಾಕಿರುವುದನ್ನು ಖಾತರಿಪಡಿಸಲು 6522 ಮೇಲ್ವಿಚಾರಕರು, 1,020 ಸಂಚಾರಿ ಘಟಕಗಳು ಕಾಲಕಾಲಕ್ಕೆ ಕಾರ್ಯಕರ್ತರಿಗೆ, ಸಲಹೆ ಸೂಚನೆ ಮಾರ್ಗದರ್ಶನ ನೀಡಲಿದ್ದಾರೆ ಎಂದು ತಿಳಿಸಿದರು.

ಮಕ್ಕಳಿಗೆ ಉಚಿತವಾಗಿ ಲಸಿಕೆ ಹಾಕುವ ಕಾರ್ಯಕ್ರಮ ಯಶಸ್ವಿಗೊಳಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ದೇಶದಲ್ಲಿಯೇ ಮುಂಚೂಣಿಯಲ್ಲಿದೆ ಇದರ ಜೊತೆಗೆ ಕಳೆದ ಫೆಬ್ರವರಿ 7 ರಿಂದ ಮಾರ್ಚ್ 19 ರವರೆಗೆ ದಡಾರ–ರೂಬೆಲ್ಲಾ ಲಸಿಕಾ ಶಿಬಿರಗಳು ಯಶಸ್ವಿಯಾಗಿವೆ ಎಂದ ಡಾ: ಶಾಲಿನಿ ರಜನೀಶ್ ಅವರು ಕೊಪ್ಪಳ ಜಿಲ್ಲೆ ಹೆಚ್ಚಿನ ಪ್ರಗತಿ ಸಾಧಿಸಿದ ಜಿಲ್ಲೆ ಎಂಬ ಹೆಗ್ಗಳಿಕೆ ಪಾತ್ರವಾಗಿದೆ (106.93%) ಎಂದರು.

ವಿಶ್ವ ಆರೋಗ್ಯ ಪರಿವೀಕ್ಷಣೆಗೆ ಅನ್ವಯ ಶಿವಮೊಗ್ಗ ಜಿಲ್ಲೆ ಅತಿ ಹೆಚ್ಚು ಪ್ರಗತಿ ಸಾಧಿಸಿದ ಈ ಜಿಲ್ಲೆಯಾಗಿದ್ದು, ಅಂತರಾಷ್ಟ್ರೀಯ ಮೇಲ್ವಿಚಾರಣ ವಿಶೇಷ ತಂಡದಿಂದ ಕೋಲಾರ ಜಿಲ್ಲೆ ವಿಶೇಷ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದೆ ಎಂದು ಡಾ: ಶಾಲಿನಿ ರಜನೀಶ್ ಅವರು ತಿಳಿಸಿದರು.

ಶುದ್ಧ ಕುಡಿಯುವ ನೀರು:

ರಾಜ್ಯದಲ್ಲಿ ಬೇಸಿಗೆಯ ತಾಪಮಾನ ಗಣನೀಯ ಏರಿಕೆಯಾಗಿದ್ದು ಎಲ್ಲಾ ನಾಗರೀಕರಿಗೆ ಶುದ್ದ ಕುಡಿಯುವ ನೀರು ಸರಬರಾಜು ಕುರಿತಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಅಧಿಕಾರಿಗಳು ಜಂಟಿಯಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಟ್ಯಾಂಕರ್ ಮೂಲಕ ಜನ ಸಾಮಾನ್ಯರಿಗೆ ಒದಗಿಸುವ ಕುಡಿಯುವ ನೀರು ಕುಡಿಯಲು ಯೋಗ್ಯವಾಗಿರುವಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಲಾಗಿದೆ ಎಂದರು.

ಕಲುಷಿತ ನೀರು ಎಲ್ಲಿಯಾದರೂ ಸರಬರಾಜು ಆದಲ್ಲಿ 104 ಸಹಾಯವಾಣಿಗೆ ಸಂಪರ್ಕಿಸಲು ಕೋರಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರದಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಕಡು ಬೇಸಿಗೆಯಲ್ಲಿ ಯಾವುದೇ ಪ್ರದೇಶಗಳಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮಾತನಾಡಿದರು.

ಎಂಎಸ್/ಕೆಪಿಪಿ/ಕೆಎಂ

## ವಿಶ್ವವಿದ್ಯಾನಿಲಯಗಳ ಶ್ರೇಯಾಂಕ ಪ್ರಕಟ

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿರುವ ವಿಶ್ವವಿದ್ಯಾಲಯ, ಖಾಸಗಿ ವಿಶ್ವವಿದ್ಯಾಲಯ ಹಾಗೂ ಡೀಮ್ಡ್ ವಿಶ್ವವಿದ್ಯಾಲಯಗಳ ಶ್ರೇಯಾಂಕವನ್ನು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರು ಇಂದು ಬಿಡುಗಡೆಗೊಳಿಸಿದರು.

ಕರ್ನಾಟಕ ಉನ್ನತ ಶಿಕ್ಷಣ ಇಲಾಖೆಯ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ವಿಶ್ವವಿದ್ಯಾನಿಲಯಗಳ ಶ್ರೇಯಾಂಕವನ್ನು ಉದ್ಘಾಟನಾ ಆವೃತ್ತಿಯಲ್ಲಿ ಇಂದು ಪ್ರಕಟಿಸಿದೆ. ಇದನ್ನು ಐಸಿಎಆರ್‌ಟಿಇ ರೇಟಿಂಗ್ ರೀಸರ್ಚ್ ಮತ್ತು ಅನಾಲಿಸಿಸ್ ಡಿವಿಷನ್‌ನಿಂದ ಇಂಡಿಯನ್ ಸೆಂಟರ್ ಫಾರ್ ಅಕಾಡೆಮಿಕ್ ರ್‍ಯಾಂಕಿಂಗ್ ಮತ್ತು ಎಕ್ಸಲೆನ್ಸ್ ವತಿಯಿಂದ ಪ್ರತಿಷ್ಠಿತ ರೇಟಿಂಗ್ ಮಾಡಿಸಲಾಗಿದೆ.

ಭಾರತದಲ್ಲೇ ಮೊಟ್ಟಮೊದಲ ಬಾರಿಗೆ ಕರ್ನಾಟಕದಲ್ಲಿ ಎಲ್ಲ ವಿಶ್ವವಿದ್ಯಾನಿಲಯಗಳ ವಿವರವಾದ ಲೆಕ್ಕಪರಿಶೋಧನೆ ಮತ್ತು ಮೌಲ್ಯಮಾಪನ ನಡೆಸಲಾಗಿದ್ದು ಭಾರತ ಸರ್ಕಾರ ನಿಗದಿಪಡಿಸುವ ಮಾನದಂಡಗಳನ್ನೇ ಇಲ್ಲೂ ಅಳವಡಿಸಲಾಗಿದೆ. ಪ್ರತಿ ವಿಶ್ವವಿದ್ಯಾನಿಲವನ್ನು ಮೌಲ್ಯಮಾಪನಕ್ಕೆ ಒಳಪಡಿಸಿ ಅದರ ಉತ್ಕೃಷ್ಟತೆ ಶಕ್ತಿ ಮತ್ತು ಬಲಹೀನತೆ, ಪ್ರಾದೇಶಿಕವಾರು, ಭೌಗೋಳಿಕವಾರು, ಸಂಶೋಧನೆ, ಬೋಧನೆ ಕುರಿತ ಹಲವಾರು ವಿಷಯಗಳನ್ನು ಚರ್ಚೆಗೆ ಒಳಪಡಿಸಿ ಒಮ್ಮತದ ತೀರ್ಮಾನಕ್ಕೆ ಬರಲಾಗಿದೆ.

ವಿಶ್ವವಿದ್ಯಾಲಯಗಳನ್ನು ಹಲವಾರು ವಿಭಾಗಗಳಾಗಿ ವಿಂಗಡಿಸಲಾಗಿದ್ದು ಸ್ಥಾಪನೆಯಾಗಿ 05 ವರ್ಷಗಳು, 5 ರಿಂದ 10 ವರ್ಷದವರೆಗೆ ಹಾಗೂ 10 ವರ್ಷಕ್ಕಿಂತಲೂ ಹೆಚ್ಚಿನ ಅವಧಿಯನ್ನು, ಆಯಾ ವಿಶ್ವವಿದ್ಯಾನಿಲಯಗಳಲ್ಲಿರುವ ಪ್ರತಿಯೊಂದು ಐಚ್ಛಿಕ ವಿಷಯವನ್ನು ಗಣನೆಗೆ ತೆಗೆದುಕೊಳ್ಳಲಾಗಿದೆ.

ಪ್ರತಿ ವಿಶ್ವವಿದ್ಯಾನಿಲಯಕ್ಕೂ ಸ್ಟಾರ್ ರೇಟಿಂಗ್ ನಿಡಲಾಗಿದೆ. ಇದನ್ನು ಪ್ರತಿ ವರ್ಷವೂ ಮಾಡಲಾಗುವುದು. ರಾಜ್ಯದಲ್ಲಿರುವ ಒಟ್ಟು 38 ವಿಶ್ವವಿದ್ಯಾನಿಲಯಗಳಲ್ಲಿರುವ 27 ವಿಷಯಗಳನ್ನು ಗುರುತಿಸಲಾಗಿದ್ದು ಒಟ್ಟು 1026 ಡಾಟಾ ಪಾಯಿಂಟ್ ನೀಡಲಾಗಿದೆ.

**ಈ ವಿಷಯಗಳನ್ನು ಕಲೆ ಹಾಕಲು ಸ್ಪರ್ಧಾತ್ಮಕವಾಗಿದ್ದು ಬಹಳ ಶ್ರಮವಹಿಸಲಾಗಿದ್ದು ಒಟ್ಟು 3500 ದೂರವಾಣಿ ಕರೆಗಳನ್ನು ಮಾಡಲಾಗಿದೆ. ಅಲ್ಲದೆ ಅಷ್ಟೇ ಸಂಖ್ಯೆಯ ಇಮೇಲ್‌ಗಳನ್ನು ಮಾಡಲಾಗಿದೆ. ಅಂತಾರಾಷ್ಟ್ರೀಯ ಪ್ರತಿಷ್ಠಿತ ಸಂಸ್ಥೆ ನೆಲ್‌ಸನ್ ಸಹಯೋಗದೊಡನೆ ಶೈಕ್ಷಣಿಕ, ನೇಮಕಾತಿ ಮತ್ತು ವಿದ್ಯಾರ್ಥಿಗಳು ಈ ಮೂರು ಹಂತದಲ್ಲಿ ಸರ್ವೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗೆ http://www/icareratings.com&http://kshec.ac.in ನ್ನು ಸಂಪರ್ಕಿಸಬಹುದಾಗಿದೆ.**

**ಎಂಎಸ್/ಕೆಎಂ**

ಛಾಯಾಚಿತ್ರ ಶೀರ್ಷಿಕೆ:

ಕರ್ನಾಟಕ ಸರ್ಕಾರವು ಕೈಗೊಂಡ ಮಹಿಳಾ ಆರ್ಥಿಕ ಅಭಿವೃದ್ಧಿಯ ಕಾರ್ಯವನ್ನು ಗುರುತಿಸಿ ವಿಕನೆಕ್ಟ್ ಇಂಟರ್‌ನ್ಯಾಷನಲ್ ಸಂಸ್ಥೆಯು "Most-Supportive State Government Award 2017" ಪ್ರಶಸ್ತಿಗೆ ಆಯ್ಕೆ ಮಾಡಿದೆ. ರಾಜ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಕೆ. ರತ್ನಪ್ರಭ ಅವರು ಇಂದು ವಾಷಿಂಗ್ಟನ್ ಡಿ.ಸಿ. ಯಲ್ಲಿ ಪ್ರಶಸ್ತಿ ಸ್ವೀಕರಿಸಿದರು.

## ಮಾರ್ಚ್ 31ಕ್ಕೆ ಸೆಟ್‌ಟಾಪ್ ಬಾಕ್ಸ್ 4ನೇ ಹಂತ ಮುಕ್ತಾಯ

ಬೆಂಗಳೂರು, ಮಾರ್ಚ್ 31 (ಕರ್ನಾಟಕ ವಾರ್ತೆ)

**ಕೇಂದ್ರ ವಾರ್ತಾ ಮತ್ತು ಪ್ರಸಾರ ಮಂತ್ರಾಲಯ ದೇಶಾದ್ಯಂತ ಉತ್ತಮ ಗುಣಮಟ್ಟದ ಟಿ.ವಿ. ಕಾರ್ಯಕ್ರಮಗಳ ವೀಕ್ಷಣೆಗಾಗಿ ಸೆಟ್‌ಟಾಪ್ ಬಾಕ್ಸ್‌ನ್ನು ಕಡ್ಡಾಯಗೊಳಿಸಿ ವಿವಿಧ ಹಂತಗಳಲ್ಲಿ ಜಾರಿಗೆ ತಂದಿದ್ದು ಮಾರ್ಚ್ 31 , 2017 ನಾಲ್ಕನೆ ಹಂತ ಮುಕ್ತಾಯವಾಗಿದೆ.**

**ಇನ್ನು ಮುಂದೆ ಎಲ್ಲಾ ಕೇಬಲ್ ವಿತರಕರು, ಸ್ಥಳೀಯ ಕೇಬಲ್ ಆಪರೇಟರ್‌ಗಳು ಡಿಜಿಟಲ್ ಉಪಕರಣ ಸೌಲಭ್ಯದ ಸೆಟ್‌ಟಾಪ್ ಬಾಕ್ಸ್ ಮೂಲಕ ಪ್ರಸಾರ ಮಾಡಲು ಸೂಚಿಸಲಾಗಿದೆ.**

ಇದನ್ನು ಉಲ್ಲಂಘಿಸಿದ್ದಲ್ಲಿ ಕೇಬಲ್ ಟಿ.ವಿ. ನಿಯಂತ್ರಣ ಕಾಯ್ದೆಯನ್ವಯ ಕಾನೂನು ಕ್ರಮ ಜರುಗಿಸಲಾಗುವುದೆಂದು ಭಾರತ ಸರ್ಕಾರದ ವಾರ್ತಾ ಮತ್ತು ಪ್ರಸಾರ ಮಂತ್ರಾಲಯ ಸುತ್ತೋಲೆ ಹೊರಡಿಸಿದೆ.

ಎಸ್ಎಂ/ಜೆಡಿ/ಕೆಎಂ